608

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕಾರವಾರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ(ಪ-1)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ನಅಇ 272 ಬೆಮಪ್ರಾ:2011, ದಿನಾಂಕ:17.10.2011.
2. ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ: ಕಾನಪ್ರಾ:ಕಾರವಾರ: ಮಹಾಯೋಜನೆ(ಪ-1)ಅಂ.ಮೋ-1:2013-14, ದಿನಾಂಕ:15-02-2014.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂ:ನಗ್ರಾಯೋ(15): ಕಾರವಾರ:ಮಯೋ(ಪ-1):ಅಂತಿಮ:2013-14 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:24-04-2014.
4. ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 24-05-2017 ರಂದು ಜರುಗಿದ ಸಭೆಯ ನಡಾವಳಿ.
5. ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯ ದಿನಾಂಕ:03-06-2017.
6. ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಕಾನಪ್ರಾ: ಕಾರವಾರ: ಮಹಾಯೋಜನೆ (ಪ-1):ಅಂ.ಮೋ:1:2013-14, ದಿನಾಂಕ:11-08-2017.
7. ಸರ್ಕಾರದ ಏಕ ಕಡತ ಸಂಖ್ಯೆ:ನಅಇ:179:ಬೆಮಪ್ರಾ:2014 ರಲ್ಲಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರು ನೀಡಿರುವ ಅಭಿಪ್ರಾಯ ದಿನಾಂಕ:28-10-2017.

******

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು 8385 13/3/18

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕಾರವಾರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪ-1) ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರವು ಕಾರವಾರ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ(ಪ-I) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆ(ಪ-I)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ. ಹಾಗೂ ಮೇಲೆ ಓದಲಾದ (3)ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಮಹಾಯೋಜನೆ (ಪ-1)ಕ್ಕೆ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (4)ರಲ್ಲಿ ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಕಾರವಾರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-I)ಯಲ್ಲಿ ಮಾನ್ಯ ಶಾಸಕರು, ಕಾರವಾರ-ಅಂಕೋಲಾ ವಿಧಾನಸಭಾ ಕ್ಷೇತ್ರ ಇವರು ತಿಳಿಸಿರುವಂತೆ ಕೆಲವು ನ್ಯೂನತೆಗಳನ್ನು ಸರಿಪಡಿಸಲು ಹಾಗೂ ಮಂಗಳೂರು ಹಾಗೂ ಉಡುಪಿ ಸ್ಥಳೀಯ ಯೋಜನಾ ಪ್ರದೇಶಗಳಿಗೆ ಸರ್ಕಾರದ

ಅಧಿಸೂಚನೆ ಸಂಖ್ಯೆ: ನಅಇ 298 ಬೆಂರೂಪ್ರಾ 2013 ದಿನಾಂಕ:26.06.2014 ರಲ್ಲಿ 0.10 ಹೆಕ್ಟೇರ್ಸ್ ಅದಕ್ಕಿಂತ ಕಡಿಮೆ ಇರುವ ವಿಸ್ತೀರ್ಣದ ಖಾಸಗಿ ವಿನ್ಯಾಸಗಳಲ್ಲಿ ಉದ್ಯಾನವನ / ಬಯಲುಜಾಗೆ ಹಾಗೂ ನಾಗರೀಕ ಸೌಲಭ್ಯದ ವಿನಾಯಿತಿ ನೀಡಿರುವಂತೆ ಕಾರವಾರ ಮಹಾಯೋಜನೆಯಲ್ಲಿಯೂ ಅವಕಾಶ ಕಲ್ಪಿಸಲು ಮಾನ್ಯ ಶಾಸಕರು ಕೋರಿರುವಂತೆ ಈ ಬಗ್ಗೆ ಪ್ರಾಧಿಕಾರದ ಸಭೆಯಲ್ಲಿ ಪರಿಶೀಲಿಸಿ ತಾಂತ್ರಿಕವಾಗಿ ಸರಿಯಿದ್ದುದನ್ನು ಅಳವಡಿಸಿಕೊಂಡು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶಿಸಲಾಗಿರುತ್ತದೆ.

ಅದರಂತೆ, ಮೇಲೆ ಓದಲಾದ (5)ರ ಪ್ರಾಧಿಕಾರದ ಸಭೆಯಲ್ಲಿ ಮಾರ್ಪಾಡುಗಳೊಂದಿಗೆ ನಕ್ಷೆ ಮತ್ತು ವರದಿಯನ್ನು ತಯಾರಿಸಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ತೀರ್ಮಾನಿಸಿದೆ.

ಮೇಲೆ ಓದಲಾದ (6)ರ ಪತ್ರದಲ್ಲಿ ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರವು ದಿನಾಂಕ:03.06.2017ರ ಪ್ರಾಧಿಕಾರದ ಸಭೆಯ ನಿರ್ಣಯದಂತೆ, ನಕ್ಷೆಗಳನ್ನು ಹಾಗೂ ವರದಿ ತಯಾರಿಸಿ ಪ್ರಸ್ತಾವನೆಯನ್ನು ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದ್ದು, ಕಾರವಾರ ನಗರದ ಜನಸಂಖ್ಯೆಯು 2021ರಲ್ಲಿ 2,00,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಕಾರವಾರ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 9656.00 ಹೆಕ್ಟೇರ್ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 3444.55 ಹೆಕ್ಟೇರ್ ಕನರ್‌ಬೇಷನ್ ಪ್ರದೇಶದಲ್ಲಿ ವಸತಿಗಾಗಿ 1986.27 ಹೆಕ್ಟೇರ್ (ಶೇ.57.66), ವಾಣಿಜ್ಯಕ್ಕಾಗಿ 132.44 ಹೆಕ್ಟೇರ್ (ಶೇ.3.85), ಕೈಗಾರಿಕೆಗಾಗಿ 191.42 ಹೆಕ್ಟೇರ್, (ಶೇ.5.56), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕೆ 103.38 ಹೆಕ್ಟೇರ್, (ಶೇ.3.00) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 344.97 ಹೆಕ್ಟೇರ್ (ಶೇ.10.01) ಹಾಗೂ ಸಾರಿಗೆ/ ಸಂಪರ್ಕ ವಲಯಕ್ಕೆ 658.65 ಹೆಕ್ಟೇರ್ (ಶೇಕಡ 19.12), ನಾಗರೀಕ ಸೌಲಭ್ಯಕ್ಕಾಗಿ 27.42 ಹೆಕ್ಟೇರ್ (ಶೇ.0.80) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ಸೂಕ್ತವಾಗಿ ರೂಪಿಸಲಾಗಿದ್ದು, ಸದರಿ ಮಹಾ ಯೋಜನೆ(ಪ-I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಪರಿಶೀಲಿಸಬಹುದೆಂದು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 179 ಬೆಮಪ್ರಾ 2014, ಬೆಂಗಳೂರು, ದಿನಾಂಕ: 07.03.2018**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಾರವಾರ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ(ಪ-I)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರವು ಅಂತಿಮ ಅನುಮೋದನೆಯನ್ನು ನೀಡಿದೆ. ಮಹಾ ಯೋಜನೆ (ಪ- I)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

606

<u>ಷರತ್ತು:</u>

1) ಪ್ರಾಧಿಕಾರವು ಮಹಾಯೋಜನೆ (ಪ-I)ಯನ್ನು 2021ರ ಯೋಜನಾ ಅವಧಿಗೆ ತಯಾರಿಸಿದ್ದು, ಯೋಜನಾ ಅವಧಿಯು ಪೂರ್ಣಗೊಳ್ಳುವುದರ ಒಳಗಾಗಿ ಮಹಾಯೋಜನೆ (ಪ-2)ನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸತಕ್ಕದ್ದು.

2) ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರು 200 ಪ್ರತಿಗಳನ್ನು ವಿಶೇಷ ರಾಜ್ಯ ಪತ್ರದಲ್ಲಿ ಮುದ್ರಿಸಿ, 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಹಾಗೂ 100 ಪ್ರತಿಗಳನ್ನು ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಕಳುಹಿಸುವಂತೆ ಕೋರಲಾಗಿದೆ.

<u>ಪ್ರತಿಯನ್ನು:</u>

1) ಜಿಲ್ಲಾಧಿಕಾರಿಗಳು, ಕಾರವಾರ ಜಿಲ್ಲೆ, ಕಾರವಾರ.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
3) ಆಯುಕ್ತರು, ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರ, ಕಾರವಾರ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಕಾರವಾರ- ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
5) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.